ಬೆಂಗಳೂರು ಸಿಟಿ ಮ್ಯುನಿಸಿಪಲ್ ಬೋರ್ಡು ಆಫೀಸಿನಿಂದ.

ತಾರೀಖು 12ನೆ ಏಪ್ರಿಲ್ 1909.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ :—ಗೌರ್ನಮೆಂಟಿನಿಂದ ಸಾದರಾದ 29—6—1901ನೆ ನಂ॥ ಕ್ಯೂ ನಂ 17691-L. B. (P) 633ನೆ ನಂಬರ್ ಪ್ರೊಸೀಡಿಂಗ್ಸ್ ಅನುಸರಿಸಿ ಇದರ ಮಾರ್ಜಿನ್ನಲ್ಲಿ ತೋರಿಸಿರುವ ಬೆಂಗಳೂರು ಸಿಟಿ ಮಲ್ಲೇಶ್ವರ ಎಕ್ಸ್‌ಟೆಂಷನ್‌ಗೆ ಸೇರಿದ ಕಟ್ಟಡಕಟ್ಟತಕ್ಕ ಸೈಟುಗಳನ್ನ 1909ನೆ ಇಸವಿ ಏಪ್ರಿಲ್ ತಾರೀಖು 20ರಲ್ಲು ಹರಾಜು ಮೂಲಕ ವಿಕ್ರಯಿಸತಕ್ಕದ್ದೆಂತ ನಿಶ್ಚಯಿಸಿ ಇರುತ್ತಾಗಿ ಹರಾಜಿನಲ್ಲಿ ಛಡಿ ಸವಾಲು ಮೂಲಕ ಪಡದುಕೊಳ್ಳಲು ಇಷ್ಟಪುಳ್ಳವರು ಅದೇ ತಾರೀಖು ಪ್ರಾತಃಕಾಲ 8 ಘಂಟೆ ಲಾಗಾಯಿತು ಆ ಯಾಯ ಸೈಟುಗಳ ಬಳಿ ಹಾಜರಿದ್ದು ಛಡಿ ಸವಾಲ್ ಮೂಲಕ ಈ ಕೆಳಗೆ ಕಂಡ ಪರತ್ತುಗಳಿಗೆ ವಳಪಟ್ಟು ಛಡಿ ಸವಾಲ್‌ನಲ್ಲಿ ಪಡದುಕೊಳ್ಳಬಹುದಾಗಿರುತ್ತೆ. ಆ ದಿವಸ ಹರಾಜು ಪೂರ್ಯಸದೆ ನಿಲ್ಲುವ ಸೈಟುಗಳನ್ನು ಮರು ದಿವಸಗಳಲ್ಲಿ ಅದೇ ಟೈಮಿನಲ್ಲಿ ಹರಾಜು ಮಾಡಿಸಲ್ಪಡುತ್ತೆ.

ಮಲ್ಲೇಶ್ವರ ಎಕ್ಸ್‌ಟೆಂಷನ್.

ಬಿಂಗ್ಲೆ ಸೈಟುಗಳು	... 143	... ...	215 × 50
,,	... 144	... ...	214 × 160
,,	... 132	... ...	217 × 340
,,	... 133	... ...	217 × 226
,,	... 134	... ...	216 × 227
,,	... 135	... ...	
,,	... 136	... ...	
,,	... 137	... ...	
,,	... 138	... ...	
ಹಿಂದೂ ಬ್ಯಾಕ್	... 118	... ...	100 × 30
,,	... 306	... ...	
,,	... 307	... ...	
,,	... 308	... ...	
,,	... 466	... ...	
,,	... 467	... ...	
,,	... 546	... ...	
,,	... 547	... ...	
ಮಹಮ್ಮದೀಯರ ಬ್ಯಾಕ್	... 139	... ...	100 × 30
,,	... 140	... ...	
,,	... 161	... ...	
,,	... 162	... ...	
,,	... 167	... ...	

1. ಹರಾಜು ಖೈದಾದ ಕೂಡ್ಲೆ ಛಡಿ ಸವಾಲ್ ವೊಬಲಗಿನಲ್ಲಿ ಶೇಕಡಾ 25 ರೂಪಾಯಿನಂತೆ ಆಗುವ ವೊಬಲಗನ್ನ ಶೇವಣಿ ಇಡಬೇಕು. ಹಾಗಿಡದೆ ತಪ್ಪಿದರೆ ಕೂಡ್ಲೆ ದುಸರಾ ಹರಾಜು ಮಾಡಿಸಿ ಬರುವ ಲುಕ್ಸಾನಿಗೆ ವೊದಲು ಛಡಿ ಸವಾಲ್‌ದಾರನ್ನ ಗುರಿಮಾಡಲ್ಪಡುತ್ತೆ.

2. ಹರಾಜು ತಾರೀಖು ಲಾಗಾಯಿತು 15 ದಿವಸದೊಳಗಾಗಿ ಬಾಕಿ ನಿಲ್ಲುವ ವೊಬಲಗಂದರೆ ಛಡಿಸವಾಲ್ ವೊಬಲ್ಗೆ ಭರ್ತಿಯಾಗಿ ಕೊಡತಕ್ಕ ಶೇಕಡಾ 75 ರೂಪಾಯಿನಂತೆ ಆಗುವ ವೊಬಲಗನ್ನ ಛಡಿಸವಾಲ್‌ದಾರ ಹಾಜರಿಪಡಿಸಿ ರಸೀತಿ ಪಡಿಯಬೇಕು. ಇದಕ್ಕೆ ತಪ್ಪಿದರೆ ಶೇವಣಿ ವೊಬಲಗನ್ನ ಸರ್ಕಾರಕ್ಕೆ ದಂಡವಾಗಿ ತೆಗದುಕೊಳ್ಳುವದಲ್ಲದೆ ಪುನಃ ಅಂಥಾ ಸೈಟನ್ನ ದುಸರಾ ಹರಾಜಿಗೆ ಈಡುಮಾಡಿ ಬರುವ ನಷ್ಟಕ್ಕೆ ವೊದಲು ಛಡಿಸವಾಲ್‌ದಾರನ್ನ ಗುರಿಮಾಡಲ್ಪಡುತ್ತೆ.

3. ಹರಾಜು ಮಂಜೂರಾದ ಕೂಡ್ಲೆ ಸೈಟನ್ನ ಛಡಿಸವಾಲ್‌ದಾರನು ಸ್ವಾಧೀನಪಡಿಸಿಕೊಳ್ಳಬೇಕು.

4. ಕೊಟ್ಟ ತಾರೀಖಿನಾರಭ್ಯ 30 ದಿವಸದೊಳಗಾಗಿ ಕಟ್ಟಡದ ಕೆಲಸವನ್ನ ಸುರೂ ಮಾಡತಕ್ಕದ್ದು; ಮತ್ತು 6 ತಿಂಗಳೊಳಗಾಗಿ ಕಟ್ಟಡವನ್ನು ಪೂರೈಸತಕ್ಕದ್ದು.

5. 50 ಅಡಿ ಲಾಂಬಿಗೆ ಕಡಿಮೆ ಇಲ್ಲದಷ್ಟು ಜಾಗವನ್ನು ಮೇಲ್ ಚಾವಣಿ ಇಲ್ಲದೆ ಅಂಗಳಕ್ಕಾಗಿ ಅಥವಾ ಗಾಳಿ ಬರತಕ್ಕದ್ದಕ್ಕಾಗಿ ಯಾವಾಗಲೂ ಬಿಟ್ಟಿರಬೇಕು. ಸದರೀ ಸ್ಥಳದಲ್ಲಿ ಹಂಗಾಮಿ, ಯಾ ಖಾಯಂ ಕಟ್ಟಡ ಯಾವದನ್ನೂ ಕಟ್ಟಕೂಡದು.

6. ಕಟ್ಟಡದ ಪ್ಲಾನ್ ವಗೈರೆ ಸ್ಯಾನಿಟೆರಿ ಇಂಜನಿಯರವರಿಂದ ಮಂಜೂರಾಗುವ ವರಿಗೂ ಯಾವಕಟ್ಟಡವನ್ನೂ ಪ್ರಾರಂಭಿಸಕೂಡದು. ಮಾಳಿಗೆ ಮನೆಯನ್ನ ಕಟ್ಟಲೇಕೂಡದು. ಕಟ್ಟಡಗಳೆಲ್ಲಾ ಹೆಂಚಿನದಾಗಿಯಾಗಲಿ ಅಥವಾ ತಾರಶೀದಾಗಲಿ ಇರತಕ್ಕದ್ದು.

7. ನೆಲ ಮತ್ತು ಹಿತ್ತಲು ಮಟ್ಟವು ರೋಜೀನಾ ಪಾಕೀಜಾ ಬಗ್ಗೆ ಕಕ್ಕಸ ಕಟ್ಟತಕ್ಕ ಸ್ಥಳವು ಮತ್ತು ಮನೆ ಬಚ್ಚಲು ನೀರು ಹೋಗುವದಕ್ಕೆ ಕಟ್ಟತಕ್ಕ ವೊಹರಿ ತರಹೆ ಮತ್ತು ಜಾಗ ಸಹ ಸ್ಯಾನಿಟೆರಿ ಇಂಜನಿಯರವರು ಅಪ್ಪಣೆ ಮಾಡಲು ರೀತಿಯಲ್ಲಿರತಕ್ಕದ್ದು.

8. ಬಂದು ಮತ್ತಣ ಅಥವಾ ಜಾತಿಯವರಿಗೆ ವಿಭಜಿಸಿರುವ ಬೀದಿಯಲ್ಲಿನ ಮನೆಯಲ್ಲಿ ಸದರೀ ಬೀದಿಯ ಸಮಸ್ತ ಜನಗಳ ಬರಹ ಮೂಲಕವಾದ ಒಪ್ಪಿತದ ವೇಲೆ ಡಿಪ್ಯುಟಿ ಕಮಿಷ್ಣರವರು ಮಂಜೂರ್ಮಾಡಿದ ಹೊರ್ತು ಇತರ ಮತ್ತಣ ಯಾ ಜಾತಿಯವರು ವಾಸ ಮಾಡಕೂಡದು.

9. ಕಟ್ಟಡಕ್ಕಾಗಿ ಕೊಟ್ಟಿರುವ ನಿವೇಶನಗಳಲ್ಲಿ ಹಳ್ಳ ತೆಗಿಯಕೂಡದು. ಕಟ್ಟಡಕ್ಕೋಸ್ಕರವಾಗಿ ಯಾ ನೆಲ ಮಟ್ಟವನ್ನು ಯತ್ತರಿಸುವದಕ್ಕಾಗಲಿ ಬೇಕಾಗುವ ಮಣ್ಣನ್ನ ಸ್ಯಾನಿಟೆರಿ ಇಂಜನಿಯರವರ ಅಪ್ಪಣೆ ಪ್ರಕಾರ ತೋರಿಸಲ್ಪಡುವ ಜಾಗಾದಲ್ಲಿ ತೆಗದುಕೊಳ್ಳತಕ್ಕದ್ದು.

10. ಮೇಲ್ಕಂಡ ಪರತ್ತುಗಳ ಪೈಕಿ ಯಾವದಕ್ಕಾದರು ತಪ್ಪು ನಡದಲ್ಲಿ ಕೊಡಲ್ಪಟ್ಟಿರುವ ನಿವೇಶನವನ್ನ ಹಿಡುವಳೀದಾರನು ಮುಕ್ಯವ ವಿಚಾರಣೆಯೂ ಇಲ್ಲದೆ ಹೋಗಲಾಡಿಸಿಕೊಳ್ಳುವದಕ್ಕೆ ಗುರಿಯಾಗುವನು.

11. ಮೇಲ್ಕಂಡ ಪರತ್ತುಗಳ ಪೈಕಿ ಯಾವದಕ್ಕಾದರೂ ತಪ್ಪು ನಡದದ್ದಕ್ಕೋಸ್ಕರ ನಿವೇಶನವನ್ನ ಸರ್ಕಾರಕ್ಕೆ ಶೇರಿಸಿಕೊಂಡ ಬಳಿಕ ಹಿಡುವಳೀದಾರನಾಗಲಿ ಅಥವಾ ಅವನಿಂದ ಪಡದುಕೊಂಡವರಾಗಲಿ ಯಾವ ವಿಧವಾದ ಪರಿಹಾರ ದ್ರವ್ಯಕ್ಕೂ ಯಾ ಸದರೀ ನಿವೇಶನದ ಮೇಲೆ ಖರ್ಚು ಮಾಡಿರುವ ಲಾಗವಡಿಗೂ ಹಕ್ಕುದಾರನಾಗುವದಿಲ್ಲ.

ಎ. ಸುಬ್ಬರಾವ್,
ವೈಸ್ ಪ್ರೆಸಿಡೆಂಟ್.